## ಪ್ರಬಂಧ

ಕುಳಿತವರ, ತಮ್ಮ ಮೃತ ಆಪ್ತರ ಬೂದಿಯನ್ನು ಮರದ ಆಸುಪಾಸಲ್ಲಿ ಚೆಲ್ಲಿ ಆರ್ದ್ರರಾದವರ ಅಸಹಾಯಕತನ ಸಂಕಟವನ್ನು ನೆನೆದು ಖುಷಿಪಡುವುದಿತ್ತು. ಒಟ್ಟಾರೆ ಆ ಮರಕಟುಕರಿಂದ, ಸುಮಾರು 150 ವರ್ಷಗಳ ಹಿಂದೆ ನೆಡಲಾದ ಸಸಿ ಮರ-ಹೆಮ್ಮರವಾಗಿ ಬೆಳೆದು ಜಗತ್ತಿನ ಮೂಲೆಮೂಲೆಯ ಪ್ರವಾಸಿಗರಿಗೆ, ಪರಿಸರ ಪ್ರೇಮಿಗಳಿಗೆ, ಸಿನಿಮಾ ನಿರ್ದೇಶಕರಿಗೆ, ಇವರ್‍ಯಾರೂ ಅಲ್ಲದ ಜನಸಾಮಾನ್ಯರಿಗೆ, ಅಷ್ಟೇ ಏಕೆ – ಇಡೀ ಈಶಾನ್ಯ ಇಂಗ್ಲೆಂಡಿಗೆ ಹೆಗ್ಗುರುತೇ ಆಗಿದ್ದ 'ಸಿಕಮೋರ ಗ್ಯಾಪ್ ಮರ' ಅಂದು ಕಡಿತಕ್ಕೊಳಗಾಗಿ ನೆಲದ ಮೇಲೆ ದೊಪ್ ಎಂದು ಬಿದ್ದಿತ್ತು. ಮರವನ್ನು ಕಡಿದ ನಡುರಾತ್ರಿಯಿಂದ ಬೆಳಗಿನ ತನಕವೂ ಆ ಮರವನ್ನು ತಿಳಿದವರು ಎಲ್ಲೆಲ್ಲಿ ಹೇಗೆ ಹೇಗೆ ಇದ್ದರೂ, ಅವರಿಗೆಲ್ಲ ತಮ್ಮ ಜಗತ್ತು ಏನೂ ಬದಲಾಗದೆ ನಿನ್ನೆಯಂತೆಯೇ ಇದೆ ಎನ್ನುವ ಭ್ರಮೆಯೇ ಮುಂದುವರಿದಿತ್ತು. ಹಾಗಂತ ಬೆಳಗಾಗುತ್ತಲೇ, ಒಂದು ಕೆಟ್ಟ ಹಾಸ್ಯಕ್ಕಾಗಿ ಮಾಡಿದ ಕೃತ್ಯ ನೂರೈವತ್ತು ವರ್ಷಗಳ ಇತಿಹಾಸದ ಹಾದಿ ಬದಲಿಸಿತ್ತು. 2023ರ ಸೆಪ್ಟೆಂಬರ್ 28ರ ಬೆಳಗ್ಗೆ ಆ ಮರವನ್ನು ನೋಡಿ-ಕೇಳಿ ತಿಳಿದಿದ್ದ ಎಲ್ಲರಿಗೂ ಆಘಾತ, ದುಗುಡ, ಹತಾಶೆ ಕಾದಿತ್ತು.

ಜಗತ್ತಿನ ಮೂಲೆಮೂಲೆಗಳಲ್ಲಿ ನಿತ್ಯವೂ ಮರಗಳು ಉರುಳುವುದು, ಗಿಡಗಳನ್ನು ಸವರುವುದು, ಕಟ್ಟಡವನ್ನು ಎಬ್ಬಿಸುವುದು ಹಾಗೂ ರಸ್ತೆಯನ್ನು ಹಾಸುವುದು ಅಭಿವೃದ್ಧಿಯ ಸಂಕೇತವಾಗಿರುವಾಗ, ಈಶಾನ್ಯ ಇಂಗ್ಲೆಂಡ್‌ನ ಸಣ್ಣ ಊರಿನ ಹಳೆಯ ಮರವನ್ನು ಉರುಳಿಸಿದವರು ಯಾಕೆ ಬಂಧನಕ್ಕೊಳಗಾದರು? ಹಾಗೆ ಬಂಧನಕ್ಕೊಳಗಾದವರನ್ನು ನ್ಯಾಯಾಲಯ ಏಕೆ ಅಪರಾಧಿ ಎಂದು ತೀರ್ಮಾನಿಸಿತು? ಮನುಷ್ಯರಿಗೆ ಹೀಗೊಂದು ಪ್ರಶ್ನೆ ಬರುವ ಸಾಧ್ಯತೆ ಇದೆಯೋ ಇಲ್ಲವೋ ಗೊತ್ತಿಲ್ಲ. ನಿತ್ಯವೂ ಕಡಿಯಲಾಗುವ, ಅಷ್ಟೇನೂ ಪ್ರಸಿದ್ಧವಲ್ಲದ ಅತಿ ಸಾಮಾನ್ಯ ಮರಗಳ ಸಂತತಿಗಾದರೂ ಹೀಗೊಂದು ಸಂದೇಹ ಕಾಡೀತು.

ಹತ್ತೊಂಬತ್ತನೆಯ ಶತಮಾನದ ಉತ್ತರಾರ್ಧದಲ್ಲಿ, ಇಂತಹದ್ದೆಂದು ದಾಖಲಾಗದ ದಿನದಂದು ವಕೀಲ, ಅನ್ವೇಷಕ ಮತ್ತು ಸದರಿ ಸ್ಥಳದ ಅಂದಿನ ಮಾಲೀಕ ಜಾನ್ ಕ್ಲೇಟನ್, ಅಲ್ಲಿನ ಸುಂದರ ಪರಿಸರಕ್ಕೆ ಪೂರಕವಾಗಲಿ ಎಂದು ಆ ಸಿಕಮೊರ್ ಸಸಿಯನ್ನು ನೆಟ್ಟಿದ್ದ, ಇತಿಹಾಸ ಪ್ರಸಿದ್ಧ ಹ್ಯಾಡ್ರಿಯನ್ ಗೋಡೆಯ ಪಕ್ಕದಲ್ಲಿ. ರೋಮನ್ನರು ಇಂಗ್ಲೆಂಡ್‌ಗೆ ಕಾಲಿಟ್ಟ

